**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ:65:ಇಆಸು:2013

ಕರ್ನಾಟಕ ಸರ್ಕಾರದ ಸಚಿವಾಲಯ,
6ನೇ ಮಹಡಿ, 2ನೇ ಹಂತ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:16.09.2013.

**ಪರಿಷ್ಕೃತ ಸುತ್ತೋಲೆ**

ಉಲ್ಲೇಖ:- ಇದೇ ಕ್ರಮಾಂಕದ ದಿನಾಂಕ:12.09.2013ರ ಸುತ್ತೋಲೆ.

ಕರ್ನಾಟಕ ಸರ್ಕಾರದ ಸಚಿವಾಲಯದ ಸಿಬ್ಬಂದಿ ವರ್ಗದವರು, ಅದರಲ್ಲೂ ಹೊಸದಾಗಿ ಸೇವೆಗೆ ಸೇರಿದ ಬಹುತೇಕ ಕಿರಿಯ ನೌಕರರು ಸಚಿವಾಲಯಕ್ಕೆ ಶೋಭೆ ತರದಿರುವಂತಹ ವಸ್ತ್ರಗಳನ್ನು ಧರಿಸಿ ಕಛೇರಿಗೆ ಬರುತ್ತಿರುವುದನ್ನು ಗಮನಿಸಲಾಗಿದೆ. ನೌಕರರು ಕಛೇರಿಗೆ ಬರುವಾಗ ಗೌರವ ತರುವಂತಹ ವಸ್ತ್ರಗಳನ್ನು ಧರಿಸಿ ಬರಲು ಅನುವಾಗುವಂತೆ 'ಡ್ರೆಸ್ ಕೋಡ್' ಜಾರಿಗೆ ತರುವಂತೆ ಕರ್ನಾಟಕ ಸರ್ಕಾರ ಸಚಿವಾಲಯದ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿಗಳು ಕೋರಿರುತ್ತಾರೆ.

ಪ್ರಸ್ತುತ ರಾಜ್ಯ ಸರ್ಕಾರದಲ್ಲಿ ವಾಹನ ಚಾಲಕರು ಹಾಗೂ ಗ್ರೂಪ್ 'ಡಿ' ಸಿಬ್ಬಂದಿ ವರ್ಗದವರಿಗೆ ಮಾತ್ರ ಸಾದಿಲ್ವಾರು ವೆಚ್ಚ ಕೈಪಿಡಿ 1958ರ ಪರಿಶಿಷ್ಟ (4)ರಲ್ಲಿ ಸಮವಸ್ತ್ರ ನಿಗಧಿಪಡಿಸಿದೆ. ಸದರಿ ನೌಕರರು ಇನ್ನು ಮುಂದೆ ತಪ್ಪದೇ ಸರ್ಕಾರವು ನಿಗಧಿಪಡಿಸಿರುವ ಸಮವಸ್ತ್ರ ಧರಿಸಿ ಕಛೇರಿಗೆ ಹಾಜರಾಗತಕ್ಕದ್ದು, ಮುಂದುವರೆದು, ರಾಜ್ಯ ಸರ್ಕಾರದಲ್ಲಿ ಸೇವೆ ಸಲ್ಲಿಸುತ್ತಿರುವ ಇತರ ಅಧಿಕಾರಿಗಳು / ನೌಕರರುಗಳು ಸರ್ಕಾರದ ಘನತೆಗೆ ಧಕ್ಕೆ ಬಾರದಂತೆ ಮತ್ತು ಶೋಭೆಯನ್ನು ತರುವಂತಹ ಸಭ್ಯ ಉಡುಗೆ ತೊಡುಗೆಗಳನ್ನು ಮಾತ್ರ ಧರಿಸಬೇಕೆಂಬುದು ಸರ್ಕಾರದ ಆಶಯವಾಗಿರುತ್ತದೆ.

(ವೆಂಕಟಗಿರಯ್ಯ) 16/9/13
(ಶ್ರೀ ವೆಂಕಟಗಿರಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ-ತರಬೇತಿ)
(ದೂರವಾಣಿ ಸಂಖ್ಯೆ:22032655)

ಗೆ,

1. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಬೆಂಗಳೂರು
4. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಬೆಂಗಳೂರು.
5. ಎಲ್ಲಾ ಇಲಾಖೆಗಳ ಇಲಾಖಾ ಮುಖ್ಯಸ್ಥರುಗಳು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಸಚಿವಾಲಯದ ನೌಕರರ ಸಂಘ, ನೆಲಮಹಡಿ, ಬಹುಮಹಡಿಗಳ ಕಟ್ಟಡ, ಸಚಿವಾಲಯ-2, ಬೆಂಗಳೂರು-01.
7. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು / ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
8. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ, ಇ-ಆಡಳಿತ ಕೇಂದ್ರ, ಬೆಂಗಳೂರು.
9. ನಿರ್ದೇಶಕರು, ಇಡಿಸಿಎಸ್ ನಿರ್ದೇಶನಾಲಯ, ಇ-ಆಡಳಿತ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

PS-4775
23/9/13

ಹಿಂಬರಹ

ಸಂಖ್ಯೆ: ಡಿಟಿಇ 2 ಇಎಸ್‌ಟಿ(9) 2013 / 2547 ದಿನಾಂಕ: 05-10-2013

ದಿನಾಂಕ : 16.09.2013 ರ ಸರ್ಕಾರಿ ಪರಿಷ್ಕೃತ ಸುತ್ತೋಲೆ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]

2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಸಾರ್ವಜನಿಕ ಸಂಪರ್ಕಾಧಿಕಾರಿಗಳಿಗೆ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3)ಗಳಿಗೆ ಮಾಹಿತಿಗಾಗಿ.

3. ಈ ನಿದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

ಆಡಳಿತಾಧಿಕಾರಿ

5/10